ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1508
ಸದಸ್ಯರ ಹೆಸರು	:	ಶ್ರೀ ಪ್ರಕಾಶ್ ಕೆ. ರಾಥೋಡ್
ಉತ್ತರಿಸುವ ದಿನಾಂಕ	:	24-09-2021
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪ್ರಸ್ತುತ ಸಾಲಿನಲ್ಲಿ ಶಾಲಾ ಕಟ್ಟಡ ನಿರ್ವಹಣೆ, ವಸತಿನಿಲಯ, ವಸತಿ ಶಾಲಾ ಕಟ್ಟಡಗಳನ್ನು ನಿರ್ಮಿಸಿ, ವಿದ್ಯಾರ್ಥಿಗಳ ಶಿಷ್ಯವೇತನ, ಎನ್.ಸಿ.ಎಂ.ಪಿ ಯೋಜನೆ ಇವುಗಳಿಗೆ ನೀಡಿರುವ ಹಣ ಎಷ್ಟು;	2021-22ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಸರ್ಕಾರಿ ವಿದ್ಯಾರ್ಥಿ ನಿಲಯ/ ವಸತಿ ಶಾಲೆಗಳ ಕಟ್ಟಡ ನಿರ್ಮಾಣಕ್ಕಾಗಿ ರಾಜ್ಯ ಆಯವ್ಯಯದಲ್ಲಿ ರೂ.180.00 ಕೋಟಿಗಳನ್ನು ಒದಗಿಸಿಕೊಳ್ಳಲಾಗಿರುತ್ತದೆ. ಸದರಿ ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ. ರೂ.180.00 ಕೋಟಿಗಳ ಪೈಕಿ ಇದುವರೆವಿಗೂ ಬಿಡುಗಡೆ ಮಾಡಿರುವ ರೂ.45.00 ಕೋಟಿಗಳನ್ನು ಈ ಹಿಂದಿನ ಆರ್ಥಿಕ ವರ್ಷಗಳಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಕೈಗೊಳ್ಳಲಾಗುತ್ತಿರುವ ಪರಿಶಿಷ್ಟ ಜಾತಿಯ ಸರ್ಕಾರಿ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ಬಾಕಿ ಅನುದಾನದ ರೂಪದಲ್ಲಿ ಬಿಡುಗಡೆ ಮಾಡಲಾಗಿರುತ್ತದೆ. ಪ್ರಸ್ತುತ 2021-22ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ನಿಗದಿಯಾದ ಅನುದಾನದ ವಿವರ 1. ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ರೂ. 11312.62 ಲಕ್ಷಗಳು 2. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ರೂ. 35147.00 ಲಕ್ಷಗಳು
(ಆ)	ಸದರಿ ಯೋಜನೆಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು;	2021-22ನೇ ಸಾಲಿನಲ್ಲಿ ಆಗಸ್ಟ್-2021ರ ಅಂತ್ಯಕ್ಕೆ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಬಿಡುಗಡೆಯಾದ ಅನುದಾನದ ವಿವರ 1. <u>ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ:-</u> ರಾಜ್ಯ ಸರ್ಕಾರದಿಂದ ಬಿಡಗಡೆಯಾದ ಒಟ್ಟು ಅನುದಾನ:- **ರೂ. 5656.31 ಲಕ್ಷಗಳು** ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ಯಾಗಿರುವುದಿಲ್ಲ. 2. <u>ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ:-</u> ರಾಜ್ಯ ಸರ್ಕಾರದಿಂದ ಬಿಡಗಡೆಯಾದ ಒಟ್ಟು ಅನುದಾನ:- **ರೂ.11500.00 ಲಕ್ಷಗಳು** ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ಯಾಗಿರುವುದಿಲ್ಲ.

(ಇ)	ಯಾವ ಅನುಪಾತದಲ್ಲಿ ರಾಜ್ಯ ಸರ್ಕಾರ ಹಣ ಬಿಡುಗಡೆ ಮಾಡಲಾಗಿದೆ;	ಕೇಂದ್ರ ಪುರಸ್ಕೃತ ಯೋಜನೆಗಳಾದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10ನೇ ತರಗತಿ) ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ರಾಜ್ಯ ಸರ್ಕಾರವು ಈ ಕೆಳಕಂಡ ಅನುಪಾತದಲ್ಲಿ ಹಣ ಬಿಡುಗಡೆ ಮಾಡಲಾಗುತ್ತದೆ. ಕೇಂದ್ರ ಸರ್ಕಾರದ ಪಾಲು - ಶೇ. 60 ರಾಜ್ಯದ ಸರ್ಕಾರದ ಪಾಲು -ಶೇ. 40
(ಈ)	ಈ ಎಲ್ಲಾ ಯೋಜನೆಗಳ ಪ್ರಸ್ತುತ ಸಾಧನೆಗಳೇನು? (ವಿವರ ಒದಗಿಸುವುದು)	ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾಂಶಕ್ಕೆ ಶಿಕ್ಷಣ ಇಲಾಖೆಯ SATS ದತ್ತಾಂಶಕ್ಕೆ ಅಳವಡಿಸಲಾಗಿದ್ದು, SATS ದತ್ತಾಂಶಕ್ಕೆ ಅನುಗುಣವಾಗಿ ವಿದ್ಯಾರ್ಥಿಯ ವಿವರಗಳು ನವೀಕರಣಗೊಳ್ಳುವ ವ್ಯವಸ್ಥೆ ಮಾಡಲಾಗಿದೆ. ಅದರಂತೆ, ನವೀಕರಣ ವಿದ್ಯಾರ್ಥಿಗಳಿಗೆ 2021-22ನೇ ಸಾಲಿನಲ್ಲಿ ಮಂಜೂರಾತಿ ಪ್ರಕ್ರಿಯೆ ಜಾರಿಯಲ್ಲಿದೆ. ಹೊಸ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮೂಲಕ ನೊಂದಣಿ ಪ್ರಕ್ರಿಯೆ ಜಾರಿಯಲ್ಲಿದೆ. 2021-22ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ (ಎಸ್.ಎಸ್.ಪಿ.) ಅರ್ಜಿ ಆಹ್ವಾನಿಸಲಾಗಿದ್ದು, ಈವರೆವಿಗೆ 19134 ಅರ್ಜಿಗಳು ತಂತ್ರಾಂಶದಲ್ಲಿ ಸ್ವೀಕೃತವಾಗಿದ್ದು, ಅರ್ಜಿ ಸಲ್ಲಿಸುವ ಪ್ರಕ್ರಿಯೆ ಜಾರಿಯಲ್ಲಿದೆ.

ಸಕಇ 344 ಪಕವಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು.